ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1016 (1005)

ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ಉತ್ತರಿಸುವ ದಿನಾಂಕ : 21.09.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕಲಬುರಗಿ ಜಿಲ್ಲೆ, ಚಿತ್ತಾಪುರ ತಾಲ್ಲೂಕು, ಮೊಗ್ಲ ಗ್ರಾಮದಲ್ಲಿ ಮೆ.ಜೆ.ಎಸ್.ಡಬ್ಲ್ಯೂ ಸಿಮೆಂಟ್ ಲಿಮಿಟೆಡ್ ಇವರು ಸುಣ್ಣದಕಲ್ಲು ಗಣಿಗಾರಿಕೆ ಹಾಗೂ ಸಿಮೆಂಟ್ ಕಾರ್ಖಾನೆ ನಿರ್ಮಿಸಲು 5 ವರ್ಷಗಳ ಹಿಂದೆ ಸದರಿ ಗ್ರಾಮದಲ್ಲಿ ಹಾಗೂ ಸುತ್ತಮುತ್ತಲಿನ ರೈತರ ಜಮೀನನ್ನು ಖರೀದಿಸಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ದಿನಾಂಕ 06.09.2012 ರಂದು ನಡೆದ 29ನೇ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಸಭೆಯಲ್ಲಿ 4.30 ಎಂಟಿಪಿಎ ಸಾಮರ್ಥ್ಯದ ಸಿಮೆಂಟ್ ಕಾರ್ಖಾನೆಯನ್ನು ಸ್ಥಾಪಿಸಲು ಕಲಬುರಗಿ ಜಿಲ್ಲೆ ಚಿತ್ತಾಪುರ ತಾಲ್ಲೂಕು ಮೊಗ್ಲ ಗ್ರಾಮದಲ್ಲಿ ಮೆ:ಜೆ.ಎಸ್.ಡಬ್ಲ್ಯೂ ಸಿಮೆಂಟ್ ಲಿಮಿಟೆಡ್ ಸಂಸ್ಥೆಗೆ ಅನುಮೋದನೆ ನೀಡಲಾಗಿದ್ದು, ಯೋಜನೆಗಾಗಿ 171 ಎಕರೆ ಜಮೀನನ್ನು ರೈತರ ಒಪ್ಪಿಗೆಯೊಂದಿಗೆ ಕೆ.ಐ.ಎ.ಡಿ.ಬಿ.ಯಿಂದ ವಶಪಡಿಸಿ ಕಂಪನಿಗೆ ಹಸ್ತಾಂತರಿಸಲು ಅನುಮೋದನೆ ನೀಡಲಾಗಿರುತ್ತದೆ.
ಆ	ಸದರಿ ಕಂಪನಿಯವರು ಇದುವರೆವಿಗೂ ಕಾರ್ಖಾನೆ ಸ್ಥಾಪಿಸಲು ಮುಂದಾಗದಿರಲು ಕಾರಣವೇನು; (ಸಂಕ್ಷಿಪ್ತ ವಿವರ ನೀಡುವುದು)	ಕಂಪನಿಯಿಂದ ಲಭ್ಯವಿರುವ ಮಾಹಿತಿ ಪ್ರಕಾರ ಗಣಿ ಗುತ್ತಿಗೆಯ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿಗಾಗಿ ಕಾಯುತ್ತಿರುವುದಾಗಿ ತಿಳಿಸಿರುತ್ತಾರೆ.
ಇ	ರಾಜ್ಯದಲ್ಲಿ ಕೈಗಾರಿಕೆಗಳನ್ನು ನಿರ್ಮಿಸಲು ಉದ್ದಿಮೆದಾರರು ಮುಂದೆ ಬಂದಲ್ಲಿ, ಸರ್ಕಾರದಿಂದ ಸಿಗುವ ಸೌಲಭ್ಯಗಳಾವುವು? (ಸಂಪೂರ್ಣ ವಿವರ ನೀಡುವುದು)	ರಾಜ್ಯದಲ್ಲಿ ಸಮಗ್ರ ಕೈಗಾರಿಕಾಭಿವೃದ್ಧಿಗೆ ನೂತನ ಕೈಗಾರಿಕಾ ನೀತಿ 2020-25ನ್ನು ದಿನಾಂಕ 13.08.2020 ರಿಂದ ಜಾರಿಗೆ ತರಲಾಗಿದೆ. ಸದರಿ ನೀತಿಯಡಿ ರಾಜ್ಯದಲ್ಲಿ ಬಂಡವಾಳ ಹೂಡುವ ಕೈಗಾರಿಕೆಗಳಿಗೆ ಈ ಕೆಳಕಂಡ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಿದೆ. 1. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ. 2. ಭೂ ಪರಿವರ್ತನಾ ಶುಲ್ಕ ಮರುಪಾವತಿ. 3. ವಹಿವಾಟಿನ ಮೇಲೆ ಬಂಡವಾಳ ಹೂಡಿಕೆ ಸಹಾಯಧನ. 4. ಇಟಿಪಿ ಘಟಕ ಸಹಾಯಧನ. 5. ಅಂಕರ್ ಘಟಕ ಸಹಾಯಧನ. 6. ಎಂಎಸ್‌ಎಂಇಗಳಿಗೆ ವಿದ್ಯುತ್‌ಶಕ್ತಿ ತೆರಿಗೆ ವಿನಾಯಿತಿ

ಸಿಐ 276 ಎಸ್‌ಪಿಐ 2021

(ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು